ಕರ್ನಾಟಕ ಸರ್ಕಾರ

# ಜಿಲ್ಲಾ ಅಧಿಕಾರಿಗಳ ಕಛೇರಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಶಿವಮೊಗ್ಗ.

2 ನೇ ಮಹಡಿ, ಜಿಲ್ಲಾ ಪಂಚಾಯತ್ ಕಟ್ಟಡ, ಕುವೆಂಪು.ರಸ್ತೆ E-mail- domshimoga@gmail.com ☎ (08182) 220206

ಸಂ:ಅಸಂಕಇಶಿ/ಕಾ.ಶಿ/ಸಿ.ಆರ್-25/2018-19 ದಿನಾಂಕ:30/08/2021

## ಪತ್ರಿಕಾ ಪ್ರಕಟಣೆ

ವಿಷಯ:- ಕಾನೂನು ಪದವಿಯಲ್ಲಿ ಉತ್ತೀರ್ಣರಾದ ಅಲ್ಪಸಂಖ್ಯಾತರ ಅಭ್ಯರ್ಥಿಗಳಿಗೆ 2021-22 ನೇ ಸಾಲಿನಲ್ಲಿ ತರಬೇತಿ ಶಿಷ್ಯ ವೇತನಕ್ಕಾಗಿ ಅರ್ಜಿ ಆಹ್ವಾನಿಸುವ ಕುರಿತು.

ಉಲ್ಲೇಖ:-
1. ಸರ್ಕಾರ ಆದೇಶ ಸಂಖ್ಯೆ:ಸಕಇ/149/ಬಿಇಟಿ/99. ದಿನಾಂಕ:2/9/99.
2. ಸಕಇ/205/ಬಿಎಂಎಸ್/99, ದಿನಾಂಕ:9/10/99.
3. ಎಸ್‌ಡಬ್ಲ್ಯೂಎಲ್60/ಎಸ್‌ಡಬ್ಲ್ಯೂ/12, ದಿನಾಂಕ:2/11/99

ಶಿವಮೊಗ್ಗ ಜಿಲ್ಲೆಯಲ್ಲಿ ಕಾನೂನು ಪದವಿಯಲ್ಲಿ ಉತ್ತೀರ್ಣರಾದ ಅಲ್ಪಸಂಖ್ಯಾತರ ವರ್ಗಕ್ಕೆ ಸೇರಿದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಸಿಖ್, ಬೌದ್ಧ, ಪಾರ್ಸಿ ಅಭ್ಯರ್ಥಿಗಳಿಗೆ 2021-22 ನೇ ಸಾಲಿನಿಂದ ನಾಲ್ಕು ವರ್ಷಗಳ ಅವಧಿಯವರೆಗೆ ತರಬೇತಿ ಅವಧಿಯ ಶಿಷ್ಯ ವೇತನ ನೀಡಲು ಶಿವಮೊಗ್ಗ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖಾವತಿಯಿಂದ. ಅರ್ಜಿಗಳನ್ನು ಆಹ್ವಾನಿಸಲಾಗಿದೆ. ತರಬೇತಿಗಾಗಿ ಅರ್ಜಿಯನ್ನು ಸಲ್ಲಿಸುವ ಅಭ್ಯರ್ಥಿಗಳು ಈ ಕೆಳಕಂಡ ನಿಬಂಧನೆಗೊಳಪಟ್ಟಿರಬೇಕು.

1. ಅಭ್ಯರ್ಥಿಯು ಮತೀಯ ಅಲ್ಪಸಂಖ್ಯಾತರಾಗಿರಬೇಕು. (ಮುಸ್ಲಿಂ, ಜೈನ್, ಕ್ರಿಶ್ಚಿಯನ್, ಸಿಖ್, ಬೌದ್ಧ, ಪಾರ್ಸಿ)
2. ಅರ್ಜಿಯನ್ನು ಸ್ವೀಕರಿಸುವ ಕೊನೆಯ ದಿನಾಂಕಕ್ಕೆ ಅಭ್ಯರ್ಥಿಯು ಅಡ್ವೋಕೇಟ್ ಆಗಿ ಕಾರ್ಯನಿರ್ವಹಿಸಲು ನಿಗಧಿಪಡಿಸಲಾದ ಕಾನೂನು ಪರೀಕ್ಷೆಯಲ್ಲಿ ತೇರ್ಗಡೆಯಾಗಿ 2 ವರ್ಷಗಳ ಅವಧಿಯೊಳಗೆ ಇರುವವರು ಮಾತ್ರ ಅರ್ಜಿಯನ್ನು ಸಲ್ಲಿಸಬಹುದು.
3. ಕಾನೂನು ತರಬೇತಿಯು 4 ವರ್ಷಗಳ ಅವಧಿಯಾಗಿದ್ದು, ಮಾಸಿಕ ರೂ.5000/-ಗಳನ್ನು ಶಿಷ್ಯವೇತನ ನೀಡಲಾಗುವುದು.
4. ಅಭ್ಯರ್ಥಿಯ ಗರಿಷ್ಠ ವಯೋಮಿತಿ 30 ವರ್ಷದೊಳಗಿರಬೇಕು.
5. ತರಬೇತಿಯ ಅವಧಿಯ ಮಧ್ಯಭಾಗದಲ್ಲಿ ತರಬೇತಿಗೆ ಗೈರು ಹಾಜರಾದಲ್ಲಿ ಪಡೆಯಲಾಗಿರುವ ಶಿಷ್ಯವೇತನ ಹಣವನ್ನು ಬಡ್ಡಿಯೊಂದಿಗೆ ಹಿಂದಿರುಗಿಸಬೇಕಾಗುವುದು.
6. **ಅರ್ಜಿಯನ್ನು ಸ್ವೀಕರಿಸುವ ಕೊನೆಯ ದಿನಾಂಕ:15-09-2021**
7. ಅಪೂರ್ಣವಾದ ಹಾಗು ಕೊನೆಯ ದಿನಾಂಕದ ನಂತರ ಬಂದ ಅರ್ಜಿಯನ್ನು ಯಾವುದೇ ಮುನ್ಸೂಚನೆ ಇಲ್ಲದೇ ತಿರಸ್ಕರಿಸಲಾಗುವುದು.
8. ಅಭ್ಯರ್ಥಿಯ ಕುಟುಂಬದ ವಾರ್ಷಿಕ ಆದಾಯವು ರೂ.2.50 ಲಕ್ಷ ಮೀರಿರಬಾರದು. ಪ್ರವರ್ಗ-1 ರಡಿಯಲ್ಲಿ ಬರುವ ಅಲ್ಪಸಂಖ್ಯಾತರ ಅಭ್ಯರ್ಥಿಗಳಿಗೆ ಆದಾಯ ಮಿತಿ ಇರುವುದಿಲ್ಲ.
9. ಅಭ್ಯರ್ಥಿಯು ತಮ್ಮ ಹೆಸರನ್ನು ಬಾರ್ ಕೌನ್ಸಿಲ್‌ನಲ್ಲಿ ನೊಂದಾಯಿಸಿರಬೇಕು.
10. ಆಯ್ಕೆಯಾದ ಅಭ್ಯರ್ಥಿಗಳನ್ನು ಜಿಲ್ಲಾ ಪಬ್ಲಿಕ್ ಪ್ರಾಸಿಕ್ಯೂಟರ್ ಸರ್ಕಾರಿ ವಕೀಲರು ಅಥವಾ ಕನಿಷ್ಠ 20 ವರ್ಷಗಳ ವೃತ್ತಿಯಲ್ಲಿ ಅನುಭವ ವಕೀಲರ ಅಧೀನದಲ್ಲಿ ತರಬೇತಿ ಪಡೆಯುವುದು.
11. ವಾರ್ಷಿಕ 5 ಅಭ್ಯರ್ಥಿಗಳನ್ನು ಆಯ್ಕೆ ಮಾಡಲು ಅವಕಾಶವಿರುತ್ತದೆ.

**ಹೆಚ್ಚಿನ ವಿವರಗಳಿಗೆ ದೂರವಾಣಿ ಸಂಖ್ಯೆ 08182 220206 ಸಂಪರ್ಕಿಸಿ ಹಾಗು ಅರ್ಜಿ ನಮೂನೆಯನ್ನು ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಜಿಲ್ಲಾ ಪಂಚಾಯತ್ ಕಟ್ಟಡ, ಕುವೆಂಪು.ರಸ್ತೆ, ಶಿವಮೊಗ್ಗ ಇಲ್ಲಿ ಕಛೇರಿ ವೇಳೆಯಲ್ಲಿ ಪಡೆಯಬಹುದಾಗಿದೆ.**

(ಧರ್ಮಪ್ಪ.ಟಿ)
**ಜಿಲ್ಲಾ ಅಧಿಕಾರಿಗಳು,**
ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ,
ಶಿವಮೊಗ್ಗ

ಪ್ರತಿಯನ್ನು

1. ಮಾನ್ಯ ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಬೆಂಗಳೂರು ಇವರ ಅವಗಾಹನೆಗೆ ಸಲ್ಲಿಸಿದೆ.
2. ಕಾರ್ಯದರ್ಶಿಗಳು, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಜಿಲ್ಲಾ ನ್ಯಾಯಾಲಯಗಳ ಸಂಕೀರ್ಣ, ಶಿವಮೊಗ್ಗ ಇವರ ಅವಗಾಹನೆಗೆ ಸಲ್ಲಿಸಿದೆ.
3. ಮಾನ್ಯ ಜಿಲ್ಲಾಧಿಕಾರಿಗಳು, ಶಿವಮೊಗ್ಗ ಜಿಲ್ಲೆ, ಶಿವಮೊಗ್ಗ ಇವರ ಅವಗಾಹನೆಗೆ ಸಲ್ಲಿಸಿದೆ.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಜಿಲ್ಲಾ ಪಂಚಾಯತ್ ಶಿವಮೊಗ್ಗ ಇವರ ಅವಗಾಹನೆಗೆ ಸಲ್ಲಿಸಿದೆ.
5. ಹಿರಿಯ ಸಹಾಯಕ ನಿರ್ದೇಶಕರು, ವಾರ್ತಾ ಇಲಾಖೆ, ಶಿವಮೊಗ್ಗ ಇವರಿಗೆ ಕಳುಹಿಸುತ್ತಾ ಜಿಲ್ಲೆಯ ದೈನಂದಿನ ವೃತ್ತಪತ್ರಿಕೆಗಳಲ್ಲಿ ಉಚಿತವಾಗಿ ಪ್ರಕಟಿಸಲು ಕೋರಿದೆ.
6. ನಿಲಯ ನಿರ್ದೇಶಕರು, ಆಕಾಶವಾಣಿ, ಭದ್ರಾವತಿ ಇವರಿಗೆ ಮಾಹಿತಿಗಾಗಿ ಹಾಗು ಉಚಿತವಾಗಿ ಬಿತ್ತರಿಸಲು ಕೋರಿದೆ
7. ನಿಲಯ ನಿರ್ದೇಶಕರು, ದೂರದರ್ಶನ ಕೇಂದ್ರ, ವಾಣಿಜ್ಯ ವಿಭಾಗ, ಮುನಿರೆಡ್ಡಿ ಪಾಳ್ಯ, ಬೆಂಗಳೂರು ಇವರಿಗೆ ಕಳುಹಿಸುತ್ತಾ ಪ್ರಚಾರ ಪಡಿಸಲು ಕೋರಿದೆ.
8. ಸಂಚಲನಾಕಾರರು, ಕರ್ನಾಟಕ ರಾಜ್ಯ ಪತ್ರ ಬೆಂಗಳೂರು ಇವರಿಗೆ ರವಾನಿಸಿ ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಲು ಕೋರಿದೆ.
9. ಜಿಲ್ಲಾ ಸರ್ಕಾರಿ ವಕೀಲರು (ಪಬ್ಲೀಕ್ ಪ್ರಾಸಿಕ್ಯೂಟರ್) ನ್ಯಾಯಾಲಯ, ಶಿವಮೊಗ್ಗ ಇವರಿಗೆ ಕಳುಹಿಸುತ್ತಾ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿದೆ.
10. ಶಿವಮೊಗ್ಗ ಜಿಲ್ಲೆಯ ಎಲ್ಲಾ ತಾಲ್ಲೂಕಿನ ಅಧ್ಯಕ್ಷರು, ಬಾರ್ ಅಸೋಸಿಯೇಷನ್, ನ್ಯಾಯಾಂಗ ಇಲಾಖೆ ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಪ್ರಚಾರದೊಂದಿಗೆ ಅರ್ಹ ಅಭ್ಯರ್ಥಿಗಳಿಗೆ ಸೌಲಭ್ಯ ಒದಗಿಸಲು ಕೋರಿ ಕಳುಹಿಸಿದೆ.
11. ಕಾರ್ಯದರ್ಶಿಗಳು, ಜಿಲ್ಲಾ ವಕ್ಫ್ ಬೋರ್ಡ್ ಶಿವಮೊಗ್ಗ ಇವರಿಗೆ ಮಾಹಿತಿಗಾಗಿ ಹಾಗು ಸುದ್ದಿ ರೂಪದಲ್ಲಿ ಪ್ರಚಾರ ಮಾಡಲು ಕೋರಿದೆ.
12. ಪ್ರಧಾನ ಕಾರ್ಯದರ್ಶಿಗಳು, ಸೆಕ್ರೆಡ್ ಹಾರ್ಟ್ ಚರ್ಚ್, ಶಿವಮೊಗ್ಗ ಇವರಿಗೆ ಕಳುಹಿಸುತ್ತಾ ಪ್ರಕಟಣೆ ಕುರಿತು ಹೆಚ್ಚಿನ ಪ್ರಚಾರ ನೀಡಲು ಕೋರಿದೆ.
13. ಪ್ರಧಾನ ಕಾರ್ಯದರ್ಶಿಳು, ಜೈನ್ ಸಮುದಾಯ ಭವನದ ಮುಖ್ಯಸ್ತರು, ಶಿವಮೊಗ್ಗ ಇವರಿಗೆ ಕಳುಹಿಸುತ್ತಾ ಪ್ರಕಟಣೆ ಕುರಿತು ಹೆಚ್ಚಿನ ಪ್ರಚಾರ ನೀಡಲು ಕೋರಿದೆ.
14. ಮಾನ್ಯ ಸದಸ್ಯರು, 15 ಅಂಶಗಳ ಕಾರ್ಯಕ್ರಮ ಸಮಿತಿ ಇವರಿಗೆ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
15. ಕಛೇರಿ ಪ್ರತಿ.

C:\MN_18_19\LAWYERS\LAWYERS_ADV.DOCX